# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಎನ್.ಪಾಟೀಲ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸುಗೂರು ಇವರ ವಿರುದ್ಧ - ಇಲಾಖಾ ವಿಚಾರಣೆ – ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ.

**ಓದಲಾಗಿದೆ.**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಪತ್ರ ಸಂಖ್ಯೆ: ಜಿಪಂರಾ /ಸಿಬ್ಬಂದಿ-1 /280/ 2011-12, ದಿನಾಂಕ. 11-01-2011 & 14-02-2012.
2. ಕಾರಣ ಕೇಳುವ ನೋಟೀಸ್ ಸಂಖ್ಯೆ. ಗ್ರಾಅಪ 8 ಇಎಸ್‌ಕ್ಯೂ 2011, ದಿನಾಂಕ. 27-03-2012.
3. ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಲಿಖಿತ ಹೇಳಿಕೆ ದಿನಾಂಕ. 20-04-2012.

**ಪ್ರಸ್ತಾವನೆ:**

ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸುಗೂರಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ರೋಡಲಬಂಡಾ (ಯು.ಕೆ.ಪಿ.) ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕಾಳಾಪೂರ, ಸುಣಕಲ್ ಮತ್ತು ಚಿಕ್ಕ ಉಪ್ಪೇರಿ ಗ್ರಾಮಗಳ ಪುನರ್ವಸತಿ ಮತ್ತು ಬಡಾವಣೆಗಳ ಅಭಿವೃದ್ಧಿ ಕಾಮಗಾರಿಗಳಲ್ಲಿ ಕೂಲಿಕಾರರ ಬೇಡಿಕೆ ಇಲ್ಲದೇ ಎಂ.ಐ.ಎಸ್.ನಲ್ಲಿ ಅಳವಡಿಸದೇ ಸುಮಾರು ರೂ 80.00 ಲಕ್ಷಗಳಷ್ಟು ಅನುದಾನವನ್ನು ಸಾಮಗ್ರಿಗಳ ವೆಚ್ಚಕ್ಕಾಗಿ ಬಳಸಿ ಸರ್ಕಾರದ ಹಣವನ್ನು ದುರುಪಯೋಗಪಡಿಸಿಕೊಂಡ ಆರೋಪದ ಮೇಲೆ ಶಿಸ್ತು ಕ್ರಮ ಕೈಗೊಳ್ಳಲು ಮುಖ್ಯ ಕಾರ್ಯನಿವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರು ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ. 11-01-2011 & 14-02-2012ರ ಪತ್ರಗಳಲ್ಲಿ ಪ್ರಸ್ತಾವ ಸಲ್ಲಿಸಿರುವುದನ್ನು ಪರಿಶೀಲಿಸಿ, ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರಿಗೆ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 27-03-2012ರ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು.

ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗಂಗಾವತಿ ಇವರು ಕಾರಣ ಕೇಳುವ ನೋಟೀಸಿಗೆ ಸಲ್ಲಿಸಿರುವ ಸಮಜಾಯಷಿಯಲ್ಲಿ ಆರೋಪಗಳನ್ನು ನಿರಾಕರಿಸಿರುತ್ತಾರೆ. ಅಲ್ಲದೆ, ಸದರಿಯವರು ಆರೋಪ ಪಟ್ಟಿಯಲ್ಲಿನ ಆರೋಪಗಳು ಸುಳ್ಳು ಮತ್ತು ನಿರಾಧಾರವಾಗಿದ್ದು, ಇವರ ಮೇಲೆ ಶಿಸ್ತು ಕ್ರಮ ತೆಗೆದುಕೊಳ್ಳುವ ಪ್ರಮೇಯ ಇರುವುದಿಲ್ಲವೆಂದು ಹಾಗೂ ವಿಚಾರಣೆ ನಡೆಸುವುದನ್ನು ಕೈಬಿಡಬೇಕೆಂದು ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ. 20-04-2012ರ ಪತ್ರದಲ್ಲಿ ಕೋರಿರುತ್ತಾರೆ.

----2

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರು ಸಲ್ಲಿಸಿರುವ ವರದಿ ಹಾಗೂ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ ಆರೋಪಿತ ಅಧಿಕಾರಿಯು ಮೇಲೆ ವಿವರಿಸಿರುವಂತೆ ಹಣ ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದುದರಿಂದ ಈ ಅಧಿಕಾರಿಯ ವಿರುದ್ಧ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಇಲಾಖಾ ವಿಚಾರಣೆ ಜರುಗಿಸಲು ನಿರ್ಧರಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

**<u>ಆದೇಶ ಸಂಖ್ಯೆ. ಗ್ರಾಅಪ 8 ಇಎನ್‌ಕ್ಯೂ 2011 , ಬೆಂಗಳೂರು,</u>**
**<u>ದಿನಾಂಕ. 21-05-2012</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ ಎಂ.ಎನ್.ಪಾಟೀಲ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸುಗೂರು (ಪ್ರಸ್ತುತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗಂಗಾವತಿ) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ನಿಗಧಿಪಡಿಸಿರುವ ಕಾರ್ಯ ವಿಧಾನದ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

21/5/2012
(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,

----3

4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು.
6. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.1242, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-560 040 (ದೂರವಾಣಿ ಸಂಖ್ಯೆ. 23394245)
7. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್, ರಾಯಚೂರು - ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
8. ಶ್ರೀ ಎಂ.ಎನ್.ಪಾಟೀಲ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಗಂಗಾವತಿ
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
10. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ಇಲಾಖೆ, ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
13. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.